ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಗುಂಡಾಲ್ ಮತ್ತು ರಾಮನಗುಡ್ಡ ಜಲಾಶಯಗಳಿಗೆ ನೀರು ತುಂಬಿಸುವುದು

ಶ್ರೀಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ) :-

823 (732) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಂಡಾಲ್ ಮತ್ತು ರಾಮನಗುಡ್ಡ ಜಲಾಶಯಗಳಿಗೆ ನದಿಮೂಲದಿಂದ ನೀರು ತುಂಬಿಸುವ ಕಾಮಗಾರಿಗೆ ಅನುಮೋದನೆ ನೀಡಲಾಗಿದೆಯೇ ಹಾಗೂ ಅನುದಾನ ಬಿಡುಗಡೆ ಮಾಡಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಗುಂಡಾಲ್ ಜಲಾಶಯ ಪ್ರವಾಸಿ ತಾಣವೂ ಆಗಿರುವುದರಿಂದ ಈ ಜಲಾಶಯಕ್ಕೆ ನೀರು ತುಂಬಿಸಲು ಹಾಗೂ ಜಲಾಶಯದ ಹಿಂದೆ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಸೂಕ್ತ ಕ್ರಮ ಜರುಗಿಸಲಾಗುವುದೇ;

(ಇ) ಈ ಹಿಂದೆ ಮಾನ್ಯ ಜಲಸಂಪನ್ಮೂಲ ಸಚಿವರು ಭರವಸೆ ನೀಡಿದ್ದಂತೆ ಗುಂಡಾಲ್ ಜಲಾಶಯದ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಿ ಅನುದಾನ ಬಿಡುಗಡೆ ಮಾಡಲಾಗತ್ತೇ ; ಮಾಡಿದ್ದಲ್ಲಿ, ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ; ಆ ಪೈಕಿ ಬಾಕಿ ಇರುವ ಕಾಮಗಾರಿಗಳು ಯಾವುವು ?